# ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಬೇಡ



**ಸೂಲಿಬೆಲೆ, ಅ.30-** ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸುವುದನ್ನು ಬಿಟ್ಟು ಕಾಲಕಾಲಕ್ಕೆ ಆರೋಗ್ಯ ತಪಾಸಣೆಗೊಳಗಾಗಬೇಕು ಎಂದು ತಾಪಂ ಅಧ್ಯಕ್ಷೆ ಮಂಜುಳಾ ವೆಂಕಟೇಶ್ ತಿಳಿಸಿದರು.

ಪಟ್ಟಣದ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಹೊಸಕೋಟೆ ಎಂವಿಜೆ ವೈದ್ಯಕೀಯ ಸಂಶೋಧನಾಲಯ ಹಾಗೂ ತರಬೇತಿ ಸಂಸ್ಥೆವತಿಯಿಂದ ಹಮ್ಮಿಕೊಳ್ಳಲಾಗಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದರು.

ಮನುಷ್ಯ ದಿನನಿತ್ಯದ ಕೆಲಸಂಕಾರ್ಯಗಳ ಒತ್ತಡದ ನಡುವೆ ಸಿಲುಕಿ ತಮ್ಮ ದೇಹದ ಸಮತೋಲನ ಕಾಪಾಡಿಕೊಳ್ಳುವಲ್ಲಿ ವಿಫಲನಾಗುತ್ತಿದ್ದಾನೆ. ರಕ್ತದೊತ್ತಡ, ಸಕ್ಕರೆ ಕಾಯಿಲೆ, ಮಧುಮೇಹಗಳಂತಹಕಾಯಿಲೆಗಳಿಗೆಬಳಗಾಗಿ ಮಾನಸಿಕವಾಗಿ ಖಿನ್ನತೆಗೊಳಗಾಗುತ್ತಿದ್ದಾನೆ ಎಂದು ಆತಂಕ ವ್ಯಕ್ತಪಡಿಸಿದರು.

ಆದ್ದರಿಂದ ಕಾಲಕಾಲಕ್ಕೆ ಅಗತ್ಯವಾದ ತಪಾಸಣೆ ಮಾಡಿಸಿಕೊಂಡು ದೈಹಿಕ ಸಮತೋಲನ ಕಾಪಾಡಿಕೊಳ್ಳಬೇಕು ಎಂದರು. ಗ್ರಾಮೀಣರಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಎಂವಿಜೆ ವೈದ್ಯಕೀಯ ಸಂಸ್ಥೆ ಆಯೋಜಿಸಿರುವ ಉಚಿತ ಆರೋಗ್ಯ ತಪಾಸಣೆ ಶಿಬಿರದ ಸೇವೆ ಪ್ರಶಂಸನೀಯ ಎಂದರು.

ಎಂವಿಜೆ ಸಂಸ್ಥೆಯ ವೈದ್ಯಕೀಯ ಸೂಪರಿಡೆಂಟ್ ಪ್ರಮೋದ್ ಮಾತನಾಡಿ, ಗ್ರಾಮದಲ್ಲಿ ಪ್ರಥಮ ಬಾರಿಗೆ ಸಂಸ್ಥೆವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಪ್ರಾಥಮಿಕವಾಗಿ ಆರೋಗ್ಯ ತಪಾಸಣೆ ನಡೆಸಿ ಹೆಚ್ಚಿನ ಚಿಕಿತ್ಸೆ ನೀಡಬೇಕಾದಲ್ಲಿ ಆಸ್ಪತ್ರೆಗೆ ಶಿಫಾರಸು ಮಾಡಿ ಚಿಕಿತ್ಸೆ ಕೊಡಿಸಲಾಗುವುದು ಎಂದು ಹೇಳಿದರು.

ವೈದ್ಯಾಧಿಕಾರಿಗಳಾದ ಶಶಿಧರ್, ಕೃಷ್ಣಪ್ಪ, ಸೇರಿದಂತೆ ಆಸ್ಪತ್ರೆ ಸಿಬ್ಬಂದಿ ವರ್ಗ ಹಾಜರಿದ್ದರು.

23/11/2015

# ‘ಬಡವರಿಗೆ ಉಚಿತ ಸೇವೆ ನೀಡಿ’

ಪ್ರಜಾವಾಣಿ ವಾರ್ತೆ

ಬೆಂಗಳೂರು: ಒಂದೆಡೆ ರಕ್ತದ ಕೊರತೆ ಇದೆ. ಇನ್ನೊಂದೆಡೆ ದೃಷ್ಟಿ ಭಾಗ್ಯ ಪಡೆಯಲು ಲಕ್ಷಾಂತರ ಮಂದಿ ಕಾಯುತ್ತಿದ್ದಾರೆ. ಈ ಕೊರತೆ ನೀಗಿಸಲು ರಾಷ್ಟ್ರೀಯ ಹಬ್ಬಗಳ ಆಚರಣೆ, ಸಮಾರಂಭಗಳಲ್ಲಿ ರಕ್ತ ಹಾಗೂ ನೇತ್ರದಾನ ಶಿಬಿರ ಆಯೋಜಿಸಬೇಕು ಎಂದು ಶಾಸಕ ಭೈರತಿ ಎ.ಬಸವರಾಜು ಸಲಹೆ ನೀಡಿದರು.

ಯುನಿಕ್ ಹ್ಯೂಮನ್ ರೈಟ್ಸ್ ಟ್ರಸ್ಟ್ ವತಿಯಿಂದ ಶನಿವಾರ ಕೆ.ಆರ್.ಪುರ ಕಲ್ಕೆರೆ ಗ್ರಾಮದ ಡಿಸ್ಕವರಿ ಪಬ್ಲಿಕ್ ಶಾಲೆಯಲ್ಲಿ ಡೆಂಗಿ ಜಾಗೃತಿ ಅಭಿಯಾನದ ಅಂಗವಾಗಿ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.



ಕಾರ್ಯಕ್ರಮದಲ್ಲಿ ಎಂ.ವಿ.ಜೆ ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಉಪಮುಖ್ಯ ಪರಿವೀಕ್ಷಕ ಡಾ.ಪ್ರಮೋದ್ ತಂಡದವರು ರಕ್ತದ ಒತ್ತಡ ಪರಿಶೀಲನೆ ನಡೆಸಿದರು.

ಕೆ.ಆರ್.ಪುರ ಪೂರ್ವ ತಾಲ್ಲೂಕಿಗೆ ಸರ್ವಜ್ಞನಗರ, ಸಿ.ವಿ.ರಾಮನ್ ನಗರ ಕ್ಷೇತ್ರಗಳ ಹಲವಾರು ಗ್ರಾಮಗಳು ಒಳಪಡುತ್ತವೆ. ಬಡವರು, ಕೆಳ ಮಧ್ಯಮ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿದ್ದಾರೆ. ಅವರಿಗೆ ಖಾಸಗಿ ಆಸ್ಪತ್ರೆಗಳು ಉಚಿತ ಸೇವೆ ನೀಡಬೇಕು ಎಂದು ಮನವಿ ಮಾಡಿದರು.

ಎಂ.ವಿ.ಜೆ ಆಸ್ಪತ್ರೆಯ ಉಪಮುಖ್ಯ ಪರಿವೀಕ್ಷಕ ಡಾ.ಪ್ರಮೋದ್ ಅವರು ಡೆಂಗಿ ನಿಯಂತ್ರಿಸಲು ಸಾರ್ವಜನಿಕರ ಸಹಕಾರ ಅಗತ್ಯ ಎಂದು ಹೇಳಿದರು.

ಹೆಚ್ಚಿನ ಸಂಖ್ಯೆಯಲ್ಲಿ ... ಪಾಲ್ಗೊಳ್ಳಬೇಕು' ಎಂದು ಕೋರಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ ಕಾರಿಗಳನ್ನೂ ಆಯ್ಕೆ ಮಾಡಲಾಯಿತು.

# 'ಬಡವರಿಗೆ ಉಚಿತ ಸೇವೆ ನೀಡಿ'

ಪ್ರಜಾವಾಣಿ ವಾರ್ತೆ

ಬೆಂಗಳೂರು: ಒಂದೆಡೆ ರಕ್ತದ ಕೊರತೆ ಇದೆ. ಇನ್ನೊಂದೆಡೆ ದೃಷ್ಟಿ ಭಾಗ್ಯ ಪಡೆಯಲು ಲಕ್ಷಾಂತರ ಮಂದಿ ಕಾದಿದ್ದಾರೆ. ಈ ಕೊರತೆ ನೀಗಿಸಲು ರಾಷ್ಟ್ರೀಯ ಹಬ್ಬಗಳ ಆಚರಣೆ, ಜಯಂತ್ಯುತ್ಸವಗಳಲ್ಲಿ ರಕ್ತ ಹಾಗೂ ನೇತ್ರದಾನ ಶಿಬಿರ ಆಯೋಜಿಸಬೇಕು ಎಂದು ಶಾಸಕ ಬೈರತಿ ಎ.ಬಸವರಾಜು ಸಲಹೆ ನೀಡಿದರು.

ಯೂನಿಕ್ ಹ್ಯೂಮನ್ ರೈಟ್ಸ್ ಟ್ರಸ್ಟ್ ವತಿಯಿಂದ ಶನಿವಾರ ಕೆ.ಆರ್.ಪುರ ಕಲ್ಕೆರೆ ಗ್ರಾಮದ ಡಿಸ್ಕವರಿ ಪಬ್ಲಿಕ್ ಶಾಲೆಯಲ್ಲಿ ಡೆಂಗೆ ಜಾಗೃತಿ ಅಭಿಯಾನದ ಅಂಗವಾಗಿ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಕೆ.ಆರ್.ಪುರ ಪೂರ್ವ ತಾಲ್ಲೂಕಿಗೆ ಸರ್ವಜ್ಞನಗರ, ಸಿ.ವಿ.ರಾಮನ್ ನಗರ ಕ್ಷೇತ್ರಗಳ ಹಲವಾರು ಗ್ರಾಮಗಳು ಒಳಪಡುತ್ತವೆ. ಬಡವರು, ಕೆಳ ಮಧ್ಯಮ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿದ್ದಾರೆ. ಅವರಿಗೆ ಖಾಸಗಿ ಆಸ್ಪತ್ರೆಗಳು ಉಚಿತ ಸೇವೆ ನೀಡಬೇಕು ಎಂದು ಮನವಿ ಮಾಡಿದರು.

ಎಂ.ವಿ.ಜೆ ಆಸ್ಪತ್ರೆಯ ಉಪಮುಖ್ಯ ಪರಿವೀಕ್ಷಕ ಡಾ.ಪ್ರಮೋದ್ ಅವರು ಡೆಂಗಿ ನಿಯಂತ್ರಿಸಲು ಸಾರ್ವಜನಿಕರ ಸಹಕಾರ ಅಗತ್ಯ ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ಎಂ.ವಿ.ಜೆ ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಉಪಮುಖ್ಯ ಪರಿವೀಕ್ಷಕ ಡಾ.ಪ್ರಮೋದ್ ತಂಡದವರು ರಕ್ತದ ಒತ್ತಡ ಪರಿಶೀಲನೆ ನಡೆಸಿದರು.